ದಿನಾಂಕ 23-10-2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ : ಅರ್ಜಿದಾರರ ಪರ ಶ್ರೀ ಕೆ.ಪಿ.ಬಿ ವಕೀಲರಿಂದಃ**

ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಸಂಗತಿಗಳನ್ನು ನಾನೇ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಸಂಗತಿಗಳು ಸತ್ಯದಿಂದ ಕೂಡಿದ್ದು, ಪ್ರಮಾಣ ಪತ್ರದಲ್ಲಿರುವ ಸಹಿಗಳು ನನ್ನದೇ ಆಗಿರುತ್ತವೆ.

ಮದುವೆಯ ಆಮಂತ್ರಣ ಪತ್ರಿಕೆಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-1 ಎಂದು, 2- ಛಾಯಾ ಚಿತ್ರಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನಿ.ಪಿ-2 ಮತ್ತು 3 ಎಂದು, ಸಾರ್ವಜನಿಕ ಮಾಹಿತಿ ಅಧಿಕಾರಿ, ಕರ್ನಾಟಕ ವೈದ್ಯಕೀಯ ಸಂಸ್ಥೆ, ಹುಬ್ಬಳ್ಳಿ ರವರು ನೀಡಿದ ದಿಃ 29-11-2023 ರ ಹಿಂಬರಹವನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-4 ಎಂದು, ಸದರಿ ಹಿಂಬರದೊಂದಿಗೆ ಲಗತ್ತಿಸಿದ ದಿಃ 27-11-2023 ರ ಪತ್ರ ವ್ಯವಹಾರವನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-5 ಎಂದು ಗುರುತಿಸಲಾಯಿತು.

(ಮುಂದುವರೆದ ಮುಖ್ಯ ವಿಚಾರಣೆಗೆ ಸಮಯಾವಕಾಶ ಕೋರಿದ್ದು, ಮುಂದುವರೆದ ಮುಖ್ಯ ವಿಚಾರಣೆಗೆ ಮುಂದೂಡಲಾಯಿತು).

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ. ಹೇ. ಕೆ ಸರಿ ಇದೆ
ಎಂದು ಒಪ್ಪಿರುತ್ತಾರೆ.

Sd/-

ದಿವಾಣಿ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ
ಹಾನಗಲ್

ಸಾಕ್ಷಿದಾರರ ಸಹಿ